ಅ) ಈ ಕೇಂದ್ರಗಳಲಿಲ್ಲಾ ಪಶು ವೈದ್ಯರನ್ನು ಭರ್ತಿ ಮಾಡಲಾಗಿದೆಯೇ?

ಇ) ಈ ಕೇಂದ್ರಗಳಲ್ಲಿ ಪಶುವೈದ್ಯರನ್ನು ಭರ್ತಿ ಮಾಡಲಾಗದಿದ್ದರೆ ಅದಕ್ಕೆ ಕಾರಣವೇನು?

ಶ್ರೀ ಬಸವರಾಜ ಪಾಟೀಲ್ (ಪಶು ಸಂಗೋಪನಾ ಮತ್ತು ಪಶು ವೈದ್ಯ ಸೇವಾ ರಾಜ್ಯ ಸಚಿವರು):

ಅ) ಒಟ್ಟು 14

1) ಪಶು ವೈದ್ಯ ಆಸ್ಪತ್ರೆ	-	1
2) ಪಶು ಚಿಕಿತ್ಸಾಲಯ	-	4
3) ಸಂಚಾರಿ ಪಶು ಚಿಕಿತ್ಸಾಲಯ	-	1
4) ಪ್ರಾಥಮಿಕ ಪಶು ಚಿಕಿತ್ಸಾಲಯ	-	7
5) ಕೃತಕ ಗರ್ಭಧಾರಣಾ ಕೇಂದ್ರ	-	1
ಒಟ್ಟು	:	14

ಆ) ಇವುಗಳಲ್ಲಿ ಪಶುವೈದ್ಯ ಆಸ್ಪತ್ರೆ ಮತ್ತು ಪಶು ಚಿಕಿತ್ಸಾಲಯಗಳಲ್ಲಿ ಮಾತ್ರ ಪಶು ವೈದ್ಯರ ಹುದ್ದೆಗಳಿದ್ದು ಅವನ್ನು ಭರ್ತಿ ಮಾಡಲಾಗಿದೆ. ಸಂಚಾರಿ ಪಶು ಚಿಕಿತ್ಸಾಲಯಕ್ಕೆ ಹುದ್ದೆಯನ್ನು ಸೃಷ್ಟಿಸಬೇಕಾಗಿದೆ.

ಇ) ಸಂಚಾರಿ ಪಶು ಚಿಕಿತ್ಸಾಲಯಕ್ಕೆ ಪಶು ವೈದ್ಯಾಧಿಕಾರಿ ಹುದ್ದೆಯನ್ನು ಸೃಜಿಸುವ ಪ್ರಸ್ತಾವ ಸರ್ಕಾರದ ಪರಿಶೀಲನೆಯಲ್ಲಿದೆ.

ಮುಳಬಾಗಿಲು ತಾಲ್ಲೂಕಿನಲ್ಲಿ ರಿಲೀಫ್ ಕಾಮಗಾರಿಗಳ ಪ್ರಾರಂಭ

3526 - ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಕಂದಾಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮುಳಬಾಗಿಲು ತಾಲ್ಲೂಕಿನಲ್ಲಿ ಇತ್ತೀಚೆಗೆ ಸಕಾಲದಲ್ಲಿ ಮಳೆ ಬಾರದ ಪ್ರಯುಕ್ತ ಮೂರನೇ ಎರಡು ಭಾಗದಷ್ಟು ಜಮೀನಿನಲ್ಲಿ ಬಿತ್ತನೆಯಾಗಿಲ್ಲವೆಂದು ತಾಲ್ಲೂಕು ತಹಶೀಲ್ದಾರರವರು ಜಿಲ್ಲಾಧಿಕಾರಿಗಳಿಗೆ ವರದಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ?

ಆ) ಹಾಗಿದ್ದಲ್ಲಿ ಕೂಲಿಕಾರರಿಗೆ ಕೆಲಸ ಒದಗಿಸಲು ರಿಲೀಫ್ ಕಾಮಗಾರಿಗಳನ್ನು ಪ್ರಾರಂಭ ಮಾಡಲು ಸರ್ಕಾರದವರು ಕೈಗೊಂಡಿರುವ ಕಾರ್ಯಕ್ರಮಗಳೇನು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮುಳಬಾಗಿಲು ತಾಲ್ಲೂಕಿನಲ್ಲಿ ಹಾಲು ಉತ್ಪಾದಕರ ಸಂಘಗಳ ನೋಂದಾವಣೆ.

3380 - ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಪಶುಸಂಗೋಪನಾ ಮತ್ತು ಪಶು ವೈದ್ಯ ಸೇವಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮುಳಬಾಗಿಲು ತಾಲ್ಲೂಕಿನಲ್ಲಿ ಹಾಲು ಉತ್ಪಾದಕರ ಸಂಘಗಳಿಗೆ ನೋಂದಾವಣೆ ಮಾಡಿಕೊಳ್ಳಲು ಒಟ್ಟು ಬಾಕಿಯಿರುವ ಅರ್ಜಿಗಳೆಷ್ಟು? ಆ ಊರಿನ ಹೆಸರುಗಳೇನು?

ಆ) ಸುಮಾರು ಒಂದು ವರ್ಷದಿಂದ ನೋಂದಾವಣೆ ಮಾಡದೆ ವಿನಾಕಾರಣಗಳನ್ನು ಕೊಡುತ್ತಾ ಮುಂದಕ್ಕೆ ಹಾಕುತ್ತಿರುವ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸರ್ಕಾರದವರು ಕೂಡಲೇ ಸೂಕ್ತ ಶಿಸ್ತು ಕ್ರಮ ಕೈಗೊಳ್ಳುವರೆ?

ಶ್ರೀ ಬಸವರಾಜ್ ಪಾಟೀಲ್ (ಪಶು ಸಂಗೋಪನಾ, ಪಶು ವೈದ್ಯ ಸೇವಾ ರಾಜ್ಯ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಹಾಲಿನ ಬೆಲೆಯನ್ನು ಹೆಚ್ಚಿಸುವುದರ ಬಗ್ಗೆ

3379 - ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಪಶು ಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೋಲಾರ ಬೆಂಗಳೂರು, ತುಮಕೂರು ಮತ್ತು ಇತರೆ ಜಿಲ್ಲೆಗಳ ಹಾಲು ಉತ್ಪಾದಕರಿಂದ ಇತ್ತೀಚೆಗೆ ಜಾನುವಾರು ಮೇವಿನ ಬೆಲೆಗಳು ಜಾಸ್ತಿಯಾಗಿರುವ ಪ್ರಯುಕ್ತ ಹಾಲಿನ ಬೆಲೆಯನ್ನು ಹೆಚ್ಚಿಸಬೇಕೆಂದು ಮನವಿಗಳು ಬಂದಿವೆಯೇ?

ಆ) ಹಾಗಿದ್ದಲ್ಲಿ ಮನವಿಗಳ ಸಾರಾಂಶವೇನು?

ಇ) ಮನವಿಗಳ ಮೇಲೆ ಸರ್ಕಾರದವರು ತೆಗೆದುಕೊಂಡಿರುವ ತೀರ್ಮಾನವೇನು?

ಶ್ರೀ ಬಸವರಾಜ್ ಪಾಟೀಲ್ (ಪಶು ಸಂಗೋಪನಾ ಪಶು ವೈದ್ಯ ಸೇವಾ ರಾಜ್ಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಬೇಲಿಮಲ್ಲೂರು ಹತ್ತಿರ ತೋಟಗಾರಿಕಾ ಇಲಾಖೆಯ ಜಮೀನಿನ ವಿಸ್ತೀರ್ಣ

3477 - ಡಾ||ಡಿ.ಬಿ. ಗಂಗಪ್ಪ (ಹೊನ್ನಾಳಿ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊನ್ನಾಳಿ ತಾಲ್ಲೂಕಿನ ಬೇಲಿಮಲ್ಲೂರು ಹತ್ತಿರ ತೋಟಗಾರಿಕಾ ಇಲಾಖೆಗೆ ಸಂಬಂಧಪಟ್ಟ ತೋಟ ಹಾಗೂ ನರ್ಸರಿಗಳಿರುವ ಜಮೀನು ಎಷ್ಟಿದೆ? (ವಿವರವನ್ನು ಒದಗಿಸುವುದು)

ಶ್ರೀ ಎಂ.ಎಸ್. ಆತ್ಮಾನಂದ (ತೋಟಗಾರಿಕೆ ರಾಜ್ಯ ಸಚಿವರು):

ಅ) ಬೇಲಿಮಲ್ಲೂರು ತೋಟಗಾರಿಕೆ ಕ್ಷೇತ್ರ - 25 ಎಕರೆ
ಹೊನ್ನಾಳಿ ಸಸ್ಯಾಗಾರ (ನರ್ಸರಿ) – 1.20 ಎಕರೆ